# ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

**ಸಂಖ್ಯೆ: ಚುನಾವಣೆ/ವಿವ/16/2021-22**

ಪ್ರಾದೇಶಿಕ ಆಯುಕ್ತರ ಕಛೇರಿ,
2ನೇ ಮಹಡಿ, ಬಿ.ಎಂ.ಟಿ.ಸಿ ಕಟ್ಟಡ,
ಕೆ.ಹೆಚ್.ರಸ್ತೆ, ಶಾಂತಿನಗರ,
ಬೆಂಗಳೂರು, ದಿನಾಂಕ:08-07-2022.

## ಅಧಿಕೃತ ಜ್ಞಾಪನ

**ವಿಷಯ:** 2022ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಆಡಳಿತ ಮಂಡಳಿ ಮತ್ತು ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ಕುರಿತು.

**ಉಲ್ಲೇಖ:1.** ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಆದೇಶದ ಸಂಖ್ಯೆ:ಸಚುಪ್ರಾ/ಆಡಳಿತ/ಸೌ.ಸ.ಚು.ನೇಮಕಾತಿ /23(1)/2021-22ದಿನಾಂಕ:04-03-2022.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-07/2021-22/226 ದಿನಾಂಕ: 13-05-2022.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-09/2021-22/300 ದಿನಾಂಕ: 25-05-2022.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-10/2022-23/335 ದಿನಾಂಕ: 01-06-2022.
5. ಈ ಕಛೇರಿಯ ಸಮಸಂಖ್ಯೆ ಅಧಿಕೃತ ಜ್ಞಾಪನ ದಿ:04-06-2022.
6. ಈ ಕಛೇರಿಯ ಸಮಸಂಖ್ಯೆ ಆದೇಶ ದಿನಾಂಕ:04-06-2022.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆವಿ/ಚು-09/2022-23/581 ದಿನಾಂಕ:04-07-2022, 11/ 2022-23/583 ದಿನಾಂಕ:04-07-2022 ಮತ್ತು 12/2022-23 ದಿನಾಂಕ:05-07-2022.

********

ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರರವರ ಉಲ್ಲೇಖ(1)ರ ಆದೇಶದಂತೆ 2022ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಬೆಂಗಳೂರು ಇದರ ಆಡಳಿತ ಮಂಡಳಿ ಮತ್ತು ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರುರವರನ್ನು ಚುನಾವಣಾಧಿಕಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಲಾಗಿರುತ್ತದೆ. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರು ಉಲ್ಲೇಖ(2)ರಿಂದ (4)ರವರೆಗೆ ಸಲ್ಲಿಸಿರುವ ಕರಡು ಮತದಾರರ ಪಟ್ಟಿಗಳನ್ನು ಮತ್ತು ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ಚುನಾವಣೆ ನಡೆಸಲು ನಿಯಮಾನುಸಾರ ಅಗತ್ಯವಿರುವ ಕಾಲಾವಕಾಶವನ್ನು ಗಮನದಲ್ಲಿಟ್ಟುಕೊಂಡು ದಿನಾಂಕ:24-07-2022 ರಂದು ಚುನಾವಣಾ ದಿನಾಂಕವನ್ನು ನಿಗದಿಪಡಿಸಿ, ಉಲ್ಲೇಖ(5)ರ ಅಧಿಕೃತ ಜ್ಞಾಪನದನ್ವಯ ಚುನಾವಣೆ ದಿನಾಂಕಕ್ಕೆ 45 ದಿನಗಳ ಪೂರ್ವದಲ್ಲಿ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ, ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ

ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸುವುದರೊಂದಿಗೆ ಕರಡು ಮತದಾರರ ಪಟ್ಟಿಯ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ 30 ದಿನಗಳೊಳಗಾಗಿ ಸಲ್ಲಿಸಲು ಕಾಲಾವಕಾಶ ನೀಡಲಾಗಿರುತ್ತದೆ.

ಈ ಕಛೇರಿಯ ಉಲ್ಲೇಖ(6)ರ ಆದೇಶದಂತೆ ಸಂಬಂಧಿಸಿದ ದಾಖಲಾತಿಗಳೊಂದಿಗೆ ಡೆಲಿಗೇಟ್ ನಮೂನೆಗಳನ್ನು ಪರಿಶೀಲಿಸಿ ದೃಢೀಕರಿಸಲು ಪರಿಶೀಲನಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ಅದರಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಸದಸ್ಯ ಸಹಕಾರಿಗಳಿಂದ ಸ್ವೀಕೃತವಾಗಿರುವ ಡೆಲಿಗೇಟ್ಸ್ ನಮೂನೆಗಳನ್ನು ಪರಿಶೀಲನಾಧಿಕಾರಿಗಳಿಂದ ಪರಿಶೀಲನೆಗೆ ಒಳಪಡಿಸಿ ಅಂತಿಮ ಮತದಾರರ ಪಟ್ಟಿಯನ್ನು ತಯಾರಿಸಿ ಉಲ್ಲೇಖ(7)ರನ್ವಯ ಈ ಕಛೇರಿಗೆ ಅನುಮೋದನೆಗೆ ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಉಲ್ಲೇಖ(7)ರಂತೆ ಸಿದ್ಧಪಡಿಸಿ ಸಲ್ಲಿಸಿರುವ ಅಂತಿಮ ಮತದಾರರ ಪಟ್ಟಿಯನ್ನು ಹಾಗೂ ಪರಿಶೀಲನಾಧಿಕಾರಿಗಳ ದೃಢೀಕರಣದೊಂದಿಗೆ ಸಲ್ಲಿಸಿರುವ ಡೆಲಿಗೇಟ್ಸ್ ಫಾರಂಗಳನ್ನು ಪರಿಶೀಲಿಸಲಾಗಿದ್ದು, ವಿವಿಧ ಕಾರಣಗಳಿಂದ ಅನರ್ಹಗೊಂಡಿರುವ ಸದಸ್ಯ ಸಂಘಗಳನ್ನು, ಡೆಲಿಗೇಟ್ ನಮೂನೆಗಳನ್ನು ಸಲ್ಲಿಸದೆ ಇರುವ ಸದಸ್ಯರ ಸಂಘಗಳನ್ನು ಹಾಗೂ ಸುಸ್ತಿದಾರರಾಗಿ ಮುಂದುವರೆದಿರುವ ಸದಸ್ಯರ ಸಂಘಗಳನ್ನು ಅಂತಿಮ ಅರ್ಹ ಮತದಾರರ ಪಟ್ಟಿಯಿಂದ ಕೈಬಿಡಲಾಗಿರುತ್ತದೆ. ದಿನಾಂಕ: 24-07-2022ರಂದು ಚುನಾವಣೆಯನ್ನು ನಡೆಸಲು ನಿಗದಿಪಡಿಸಿರುವಂತೆ ನಿಯಮಾನುಸಾರ ಕನಿಷ್ಠ 15 ದಿನಗಳ ಪೂರ್ವದಲ್ಲಿ ಅಂತಿಮ ಮತದಾರರ ಪಟ್ಟಿಯನ್ನು ಅನುಮೋದಿಸಿ ಈ ಮೂಲಕ ಪ್ರಕಟಿಸಿದೆ.

ಇದರೊಂದಿಗೆ ಲಗತ್ತಿಸಿರುವ ಅಂತಿಮ ಮತದಾರರ ಪಟ್ಟಿಯನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಮಹಾಮಂಡಳದ ಸೂಚನಾ ಫಲಕದಲ್ಲಿ, ಸಂಘದ ಶಾಖಾ ಕಛೇರಿಗಳಲ್ಲಿ ಹಾಗೂ ನಿಯಮಾನುಸಾರ ಅನ್ವಯಿತ ಇತರೆ ಕಛೇರಿಗಳಲ್ಲಿ ಪ್ರಚುರಪಡಿಸಲು ಅಗತ್ಯ ಕ್ರಮ ಕೈಗೊಂಡು, ಪ್ರಕಟಿಸಿದ ಬಗ್ಗೆ ಈ ಕಛೇರಿಗೆ ಕೂಡಲೇ ವರದಿ ಸಲ್ಲಿಸುವುದು ಅಲ್ಲದೆ ಅಂತಿಮ ಮತದಾರರ ಪಟ್ಟಿಯನ್ನು ಮತ್ತು ಅಗತ್ಯ ದಾಖಲೆಗಳನ್ನು ಚುನಾವಣಾಧಿಕಾರಿಗಳಿಗೆ ಒದಗಿಸುವ ಬಗ್ಗೆ ಕ್ರಮ ವಹಿಸುವುದು.

**ಪ್ರಾದೇಶಿಕ ಆಯುಕ್ತರು,**
**ಬೆಂಗಳೂರು ವಿಭಾಗ, ಬೆಂಗಳೂರು**
**ಹಾಗೂ ಚುನಾವಣಾಧಿಕಾರಿಗಳು.**

ಪ್ರತಿಯನ್ನು:-

(1) ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರುರವರಿಗೆ ಅಂತಿಮ ಮತದಾರರ ಪಟ್ಟಿಯನ್ನು ಲಗತ್ತಿಸಿ ಮಾಹಿತಿಗಾಗಿ ಕಳುಹಿಸಿದೆ.

(2) ರಿಟರ್ನಿಂಗ್ ಅಧಿಕಾರಿಗಳು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

(3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಸೌಹಾರ್ದ ಸಹಕಾರಿ ಸೌಧ" ನಂ. 68, 1ನೇ ಮಹಡಿ, 17 & 18ನೇ ಅಡ್ಡರಸ್ತೆ ಮಧ್ಯೆ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560055 ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

(4) ಕಛೇರಿ ಪ್ರತಿ.